ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ರಾಜ್ಯ ಸರ್ಕಾರದ ಮಹತ್ವಾಂಕಾಂಕ್ಷಿ ಯೋಜನೆ "ಕೌಶಲ್ಯ ಕರ್ನಾಟಕ"ದ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

549(603) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರದ ಮಹತ್ವಾಂಕಾಂಕ್ಷಿ ಯೋಜನೆಯಾದ `'ಕೌಶಲ್ಯ ಕರ್ನಾಟಕ' ಯೋಜನೆಯಡಿಯಲ್ಲಿ ವಸತಿ ತರಬೇತಿ ಕಾರ್ಯಕ್ರಮಗಳನ್ನು ಆರಂಭಿಸಲಾಗಿದೆಯೇ ;

(ಆ) ಆರಂಭಿಸಿದ್ದಲ್ಲಿ, ಸದರಿ ಯೋಜನೆಗಾಗಿ ಎಷ್ಟು ಹಣವನ್ನು ಒದಗಿಸಲಾಗಿದೆ ;

(ಇ) ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಗ್ರಾಮೀಣ ಯುವಕ/ಯುವತಿಯವರ ವಸತಿ ಸಹಿತ ತರಬೇತಿ ಕಾರ್ಯಕ್ರಮಗಳು ಅನುಷ್ಠಾನಗೊಳಿಸಲಾಗುತ್ತಿದೆ ; (ವಿವರ ನೀಡುವುದು)

(ಈ) ಸದರಿ ಯೋಜನೆಯಡಿಯಲ್ಲಿ ನವೆಂಬರ್ ಅಂತ್ಯದವರೆಗೆ ಎಷ್ಟು ಮಂದಿ ಯುವಕ/ಯುವತಿಯವರಿಗೆ ತರಬೇತಿ ನೀಡಲಾಗಿದೆ?